9. ದಿನಾಂಕ 6-3-93 ರಂದು ಶ್ರೀ ಎಂ.ಎಸ್. ಮೂರ್ತಿ, ಸಹಾಯಕ ಅಧೀಕ್ಷಕರು, ಆರ್‌ಎಂಎಸ್, ಬೆಂಗಳೂರುರವರು ಹೈಗ್ರೌಂಡ್ಸ್ ಪೊಲೀಸ್ ಠಾಣೆಗೆ ಹಾಜರಾಗಿ ದಿನಾಂಕ 3-9-93 ರಂದು ಮುಂಬೈನಿಂದ ಬೆಂಗಳೂರಿಗೆ ತಾವು ವಿಮೆ ಮಾಡಿ ಕಳುಹಿಸಿದ ಸುಮಾರು 900ರೂ. ಬೆಲೆ ಬಾಳುವ ವಸ್ತು ಕಾಣೆಯಾಗಿರುವುದಾಗಿ ಸಲ್ಲಿಸಿದ ದೂರಿನ ಮೇರೆಗೆ ಹೈಗ್ರೌಂಡ್ಸ್ ಪೊಲೀಸ್ ಠಾಣೆ ಅಪರಾಧ ಸಂಖ್ಯೆ: 115:93 ಕಲಂ 381 ಭಾ.ದಂ.ಸಂ. ಪ್ರಕಾರ ಮೊಕದ್ದಮೆ ದಾಖಲು ಮಾಡಿಕೊಂಡು ಹೆಚ್ಚಿನ ತನಿಖೆಗೆ ದಿನಾಂಕ 28-7-93 ರಂದು ಸಿಬಿಐಗೆ ವರ್ಗಾಯಿಸಲಾಗಿದೆ.

ಆ) ಮಾಹಿತಿ ಬಂದಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಆಡಳಿತ ಪರಂಪರೆಯ ಹಿತದೃಷ್ಟಿಯಿಂದ ಅಂತರ ರಾಜ್ಯಗಳಿಗೆ ಸಂಬಂಧಿಸಿದ ಪ್ರಕರಣಗಳನ್ನೂ ಅಲ್ಲದೆ ಸಾಮಾನ್ಯವಾಗಿ ವಿಶೇಷ ಮಹತ್ವದ ಪ್ರಕರಣಗಳನ್ನು ಸಿಬಿಐ ತನಿಖೆಗೆ ವಹಿಸಲಾಗಿದೆ. ಸಿಒಡಿ ಕಾರ್ಯ ನಿರ್ವಹಣೆ ಬಗ್ಗೆ ಸಾರ್ವಜನಿಕರಲ್ಲಿ ಅಪನಂಬಿಕೆ ಉಂಟಾಗುತ್ತದೆ ಎಂಬುದನ್ನು ರಾಜ್ಯ ಸರ್ಕಾರವು ಒಪ್ಪುವುದಿಲ್ಲ.

ಉ) - ಇಲ್ಲ -

ರಾಜ್ಯದಲ್ಲಿ ಮಹಿಳಾ ಪೋಲೀಸ್ ಠಾಣೆಗಳ ಪ್ರಾರಂಭ.

342 - ಶ್ರೀ ಗುರುಪಾದಪ್ಪ ನಾಗಮಾರಪಳ್ಳಿ (ಔರಾದ್) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪ್ರತಿ ಜಿಲ್ಲೆಗೊಂದರಂತೆ ಮಹಿಳಾ ಪೋಲೀಸ್ ಠಾಣೆಗಳನ್ನು ಪ್ರಾರಂಭಿಸುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಆ) ಅದರ ಪ್ರಾರಂಭಿಕ ಹಂತವಾಗಿ ಎಲ್ಲೆಲ್ಲಿ ಮಹಿಳಾ ಪೋಲೀಸ್ ಠಾಣೆಗಳನ್ನು ಪ್ರಾರಂಭಿಸಲಾಗಿದೆ?

ಇ) ಅದಕ್ಕಾಗಿ ಆಯವ್ಯಯದಲ್ಲಿ ಎಷ್ಟು ಹಣವನ್ನು ಮೀಸಲಿಡಲಾಗುವುದು?

ಈ) ಮಹಿಳೆಯರಿಗೆ ಹೆಚ್ಚಿನ ರಕ್ಷಣೆ ನೀಡುವ ಸಲುವಾಗಿ ಅದಷ್ಟು ಬೇಗ ಜಿಲ್ಲೆಗೊಂದರಂತೆ ಮಹಿಳಾ ಪೋಲೀಸ್ ಠಾಣೆಗಳನ್ನು ಪ್ರಾರಂಭಿಸಲಾಗುವುದೇ?

ಶ್ರೀ ಎಂ. ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು.) :

ಅ) ಹೌದು.

ಆ) ಬೆಂಗಳೂರು ನಗರ, ಮೈಸೂರು, ಹುಬ್ಬಳ್ಳಿ ಧಾರವಾಡ ಮತ್ತು ಮಂಗಳೂರಿನಲ್ಲಿ ಒಂದೊಂದು ಮಹಿಳಾ ಪೋಲೀಸ್ ಠಾಣೆ ಪ್ರಾರಂಭವಾಗಲಿದೆ.

ಇ) ಮೇಲ್ಕಂಡ ಠಾಣೆಗಳ ನಿರ್ವಹಣೆಗೆ ಬೇಕಾಗುವಷ್ಟು ಹಣವನ್ನು ಮೀಸಲಿಡಲಾಗುವುದು.

ಈ) ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಗಡಿ ಪ್ರದೇಶದಲ್ಲಿ ಕನ್ನಡದ ಅಭಿವೃದ್ಧಿ.

340 - ಶ್ರೀ ಗುರುಪಾದಪ್ಪ ನಾಗಮಾರಪಳ್ಳಿ (ಔರಾದ್) : ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಸರ್ಕಾರವು ಕನ್ನಡ ಜಾಗೃತಿ ವರ್ಷವನ್ನು ಆಚರಿಸುತ್ತಿರುವ ಈ ಸಂದರ್ಭದಲ್ಲಿ ರಾಜ್ಯ ಗಡಿ ಭಾಗಗಳಲ್ಲಿ ಕನ್ನಡದ ಪರಿಸ್ಥಿತಿಯ ಬಗ್ಗೆ ಚಿಂತನೆ ನಡೆಸಲು ಕೈಗೊಂಡ ಕ್ರಮಗಳೇನು?